# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 780 |
| ಉತ್ತರಿಸಬೇಕಾದ ದಿನಾಂಕ | : | 13.07.2023 |
| ಉತ್ತರಿಸುವ ಸಚಿವರು | : | ಕಾರ್ಮಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಾರ್ಮಿಕರು ಕನಿಷ್ಠ ವೇತನದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು. |
| (ಆ) | ತಾಲ್ಲೂಕು ಹಾಗೂ ಪಟ್ಟಣಗಳಲ್ಲಿ ಕೇವಲ ಕೂಲಿಗಾಗಿ ದುಡಿಸಿಕೊಳ್ಳುತ್ತಿರುವುದು ಹಾಗೂ ಶೋಷಣೆ ಮಾಡುತ್ತಿರುವವರ ಮೇಲೆ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುತ್ತಿದೆ; | ತಾಲ್ಲೂಕು ಹಾಗೂ ಪಟ್ಟಣಗಳಲ್ಲಿ ಕೇವಲ ಕೂಲಿಗಾಗಿ ದುಡಿಸಿಕೊಳ್ಳುತ್ತಿರುವುದು ಹಾಗೂ ಶೋಷಣೆ ಮಾಡುತ್ತಿರುವ ಕುರಿತು ದೂರುಗಳು ಸ್ವೀಕೃತವಾದಲ್ಲಿ, ಕನಿಷ್ಠ ವೇತನ ಕಾಯ್ದೆ, 1948ರಡಿ ಸರ್ಕಾರದಿಂದ ಅಧಿಸೂಚಿಸಲ್ಪಟ್ಟ ನಿರೀಕ್ಷಕರು ನಿಯಮಾನುಸಾರ ಪರಿಶೀಲಿಸಿ, ತಪಾಸಣೆ ನಡೆಸಿ, ಉಲ್ಲಂಘನೆಗಳು ಕಂಡುಬಂದಲ್ಲಿ ಸದರಿ ಕಾಯ್ದೆಯಡಿ ಅಧಿಸೂಚಿಸಲ್ಪಟ್ಟ ಸಕ್ಷಮ ಪ್ರಾಧಿಕಾರಿಗಳ ಮುಂದೆ ಕ್ಲೇಮ್ ಅರ್ಜಿಗಳನ್ನು ಸಲ್ಲಿಸುತ್ತಿದ್ದು, ಕ್ಲೇಮ್ ಪ್ರಾಧಿಕಾರಿಗಳು ಕಲಂ 20(1) ರಡಿ ಸದರಿ ಕ್ಲೇಮ್ ಅರ್ಜಿಗಳನ್ನು ಪರಿಶೀಲಿಸಿ, ವಿಚಾರಣೆ ನಡೆಸಿ, ನಿಯಮಾನುಸಾರ ಆದೇಶ ಹೊರಡಿಸುವ ಮೂಲಕ ವ್ಯತ್ಯಾಸದ ಕನಿಷ್ಠ ವೇತನದ ಜೊತೆಗೆ ಪರಿಹಾರವನ್ನು ಪಾವತಿಸಲು ಸಂಬಂಧಿಸಿದ ಗುತ್ತಿಗೆದಾರರು/ಸಂಸ್ಥೆಗಳಿಗೆ ನಿರ್ದೇಶನಗಳನ್ನು ನೀಡಲಾಗುತ್ತಿದೆ.<br><br>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು 41710 ಕಾರ್ಮಿಕರಿಗೆ ಸಂಬಂಧಿಸಿದಂತೆ ರೂ.143 ಕೋಟಿ ಮೊತ್ತದ 9170 ಕ್ಲೇಮ್ ಅರ್ಜಿಗಳನ್ನು ಸಕ್ಷಮ ಪ್ರಾಧಿಕಾರಿಗಳು ಮುಂದೆ ದಾಖಲಿಸಲಾಗಿರುತ್ತದೆ ಹಾಗೂ ಸದರಿ ಪ್ರಾಧಿಕಾರಿಗಳು ಕ್ಲೇಮ್ ಅರ್ಜಿಗಳ ವಿಚಾರಣೆ ನಡೆಸಿ, ಕಳೆದ ಮೂರು ವರ್ಷಗಳಲ್ಲಿ ರೂ. 50.82 ಕೋಟಿ ಮೊತ್ತಕ್ಕೆ ಆದೇಶ ಹೊರಡಿಸಿ, ಒಟ್ಟು 4406 ಕ್ಲೇಮ್ ಅರ್ಜಿಗಳನ್ನು ವಿಲೇವಾರಿ ಮಾಡಿ, ರೂ.15.16 ಕೋಟಿ ಗಳನ್ನು ಒಟ್ಟು 11363 ಕಾರ್ಮಿಕರಿಗೆ ವಿತರಿಸಲಾಗಿರುತ್ತದೆ. |
| (ಇ) | ಕನಿಷ್ಠ ವೇತನ ಕುರಿತು ಈ ಹಿಂದೆ ಸರ್ಕಾರವು ಕಾನೂನಿನಲ್ಲಿ ಬದಲಾವಣೆ ತರುವುದಾಗಿ ಸದನದಲ್ಲಿ ಹೇಳಿಕೆ ನೀಡಿರುವುದು ನಿಜವೇ? ಹಾಗಿದ್ದಲ್ಲಿ ಸದರಿ ಕಾರ್ಯವು ಯಾವ ಹಂತದಲ್ಲಿದೆ ಹಾಗೂ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು) | ಕನಿಷ್ಠ ವೇತನ ಕುರಿತು ಈ ಹಿಂದೆ ಸರ್ಕಾರವು ಯಾವುದೇ ಹೇಳಿಕೆ ನೀಡಿರುವುದಿಲ್ಲ |

ಸಂಖ್ಯೆ: ಕಾಇ 268 ಎಲ್‌ಡಬ್ಲ್ಯೂಎ 2023

(ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು